ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 15 ನೇ ಡಿಸೆಂಬರ್, 2020

ತುಮಕೂರು ಜಿಲ್ಲೆಯ ವಸಂತ ನರಸಾಪುರ ಕೈಗಾರಿಕಾ ವಲಯದ ಸಮಗ್ರ ಅಭಿವೃದ್ಧಿ ಬಗ್ಗೆ

ಶ್ರೀ ಕೆ. ಎ. ತಿಪ್ಪೇಸ್ವಾಮಿ(ನಾಮನಿರ್ದೇಶನ ಹೊಂದಿದವರು) -

721 (862) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ -

(ಅ) ತುಮಕೂರು ಜಿಲ್ಲೆಯ ವಸಂತ ನರಸಾಪುರದಲ್ಲಿ ರಾಷ್ಟ್ರೀಯ ಬಂಡವಾಳ ಹೂಡಿಕೆ ಮತ್ತು ಉತ್ಪನ್ನ ವಲಯ (National Investment and Manufacturing Zone-NIMZ) ಸ್ಥಾಪಿಸಲು 13.000 ಎಕರೆ ಪ್ರದೇಶವನ್ನು ಭೂಸ್ವಾಧೀನ ಮಾಡಿಕೊಂಡಿರುವುದು ನಿಜವೇ; ಹಾಗಿದ್ದಲ್ಲಿ, ಸಂಪೂರ್ಣ ಮಾಹಿತಿ ನೀಡುವುದು;

(ಆ) ಈ ಕೈಗಾರಿಕಾ ವಲಯವನ್ನು ಅಭಿವೃದ್ಧಿಪಡಿಸಲು ಉದ್ದೇಶಿಸಿ, ಸ್ಥಾಪಿಸಿರುವ ವಿಶೇಷ ಉದ್ದೇಶವುಳ್ಳ ನಿಗಮಕ್ಕೆ (Special Purpose Vehicle) ಕೇಂದ್ರ ಸರ್ಕಾರ ನೀಡಿರುವ ಇಕ್ವಿಟಿ ಫಂಡ್ (Equity Fund) ಎಷ್ಟು; (ಸಂಪೂರ್ಣ ವಿವರ ನೀಡುವುದು)

(ಇ) ಈ ವಿಶೇಷ ಉದ್ದೇಶವುಳ್ಳ ನಿಗಮ ಸ್ಥಾಪನೆಯಾಗಿದ್ದಲ್ಲಿ, ಇದರ ಕಾರ್ಯವ್ಯಾಪ್ತಿ ಮತ್ತು ಪ್ರಸ್ತುತದಲ್ಲಿ ನಿರ್ವಹಿಸುತ್ತಿರುವ ಕಾರ್ಯದ ವಿವರ ನೀಡುವುದು;

(ಈ) ವಸಂತನರಸಾಪುರ ಕೈಗಾರಿಕಾ ವಲಯದ ಅಭಿವೃದ್ಧಿ ಬೆಳವಣಿಗೆ ಚೆನ್ನೈ-ಬೆಂಗಳೂರು ಕೈಗಾರಿಕಾ ಕಾರಿಡಾರ್ (CBIC) ತುರ್ತು ನಿರ್ಮಾಣದ ಮೇಲೆ ಅವಲಂಬಿತವಾಗಿರುವುದು ನಿಜವೇ; ಮತ್ತು ಈ ಕಾರಿಡಾರ್ ನಿರ್ಮಾಣ ನೆನೆಗುದಿಗೆ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಸಮಸ್ಯೆಯನ್ನು ಬಗೆಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)